# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಶಹಬಾದ

**CC No: 717/2022**

CW: 11 PW: 7

| | | |
|---|---|---|
| ಹೆಸರು | : | ಅಜಯ |
| ತಂದೆಯ ಹೆಸರು | : | ರಾಮು |
| ವಯಸ್ಸು | : | 29 ವರ್ಷ |
| ಉದ್ಯೋಗ | : | ಖಾಸಗಿ ಕೆಲಸ |
| ಸ್ಥಳ | : | ವಾಡಿ |

**(ದಿನಾಂಕ: 28-03-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು)**

<u>ಮುಖ್ಯ ವಿಚಾರಣೆ: ಸ.ಸ.ಅ ವಕೀಲರಿಂದ</u>

ನನಗೆ ಆರೋಪಿತನ ಪರಿಚಯ ಇರುವುದಿಲ್ಲ. ಪ್ರಕರಣದ ಸಾಕ್ಷಿದಾರರ ಪರಿಚಯ ಇರುವುದಿಲ್ಲ. ಸಾಕ್ಷಿಗೆ ಇಂಡೆಮ್ನಿಟಿ ಬಾಂಡನ್ನು ತೋರಿಸಲಾಗಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಅದನ್ನು ನಿ.ಪಿ.13 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ.13 (ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನನಗೆ ಸೇರಿದ ಗಾಡಿ ನಂ. ಕೆ.ಎ-32, ಹೆಚ್.ಎ-5032 ನೇದ್ದರನ್ನು ಪೋಲೀಸ್ ಠಾಣೆಯಿಂದ ಬಿಡಿಸಿಕೊಳ್ಳುವಾಗ ಸಹಿ ಮಾಡಿರುತ್ತೇನೆ. ಸದರಿ ವಾಹನವನ್ನು ರಸ್ತೆ ಅಪಘಾತದಲ್ಲಿ ಜಪ್ತಿಪಡಿಸಿಕೊಳ್ಳಲಾಗಿದೆ ಎಂದರೆ ನನಗೆ ಗೊತ್ತಿರುವುದಿಲ್ಲ. ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ.

**(ಈ ಹಂತದಲ್ಲಿ ಸ.ಸ. ಅಭಿಯೋಜಕರ ಕೋರಿಕೆಯ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲಾಯಿತು)**

<u>ಪಾಟೀ ಸವಾಲು: ಸ.ಸ. ಅಭೀಯೋಜಕರಿಂದ</u>

ದಿ: 15/12/2021 ರಂದು ನಾನು ಪೋಲೀಸ್ ಠಾಣೆಗೆ ಹಾಜರಾಗಿ ರಸ್ತೆ ಅಪಘಾತದಲ್ಲಿ ಆರೋಪಿತನಿಂದ ಮೋಟರ ಸೈಕಲ್ ನಂ. ಕೆ.ಎ-32, ಹೆಚ್.ಎ-5032 ನೇದ್ದನ್ನು ಜಪ್ತಿಪಡಿಸಿಕೊಂಡಿದ್ದು ಆ ಕಾರಣಕ್ಕಾಗಿ ನಿ.ಪಿ.13 ನ್ನು ಬರೆದು ಬಿಡಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ದಿ: 29/11/2021 ರಂದು ..........ಸಾಕ್ಷಿಗೆ ಈಗ ಓದಿ ಹೇಳಲಾದ ಹೇಳಿಕೆಯನ್ನು ಅಲ್ಲಗಳೆದಿದ್ದು ಅದನ್ನು ನಿಪಿ-14 ಎಂದು ಗುರುತಿಸಲಾಯಿತು. ನಿ.ಪಿ.4 ನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ಪ್ರಕರಣದ ಬಗ್ಗೆ ಮಾಹಿತಿ ಇದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು: ಆರೋಪಿ ಪರ ಶ್ರೀ. ಸಿ.ಎಸ್.ಪಿ. ವಕೀಲರಿಂದ</u>

ಪಾಟೀ ಸವಾಲು ಇರುವುದಿಲ್ಲ.

ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೆ. ಸರಿ ಇದೆ.

**Sd/-**

ಸಿವಿಲ್ ಹಾಗೂ ಜೆ.ಎಮ್.ಎಫ್.ಸಿ.
ನ್ಯಾಯಾಧೀಶರು, ಶಹಬಾದ.